**All India Radio: Bangalore**
**National Bulletin In Kannada**
**13.08.2025  1.10pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.08.2025  1.10pm**

**<><><><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ವಿಶೇಷ ಅತಿಥಿಗಳಾಗಿ ಪಂಚಾಯತಿಗಳ ಇನ್ನೂರ ಹತ್ತು ನಾಯಕರು ಭಾಗಿ

೨. ನವದೆಹಲಿಯಲ್ಲಿಂದು ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ

೩. ದೇಶದ ವಿವಿಧೆಡೆ ಇಂದು ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ

೪. ಮಹಾರಾಜ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ: ಇಂದಿನ ಮೊದಲ ಪಂದ್ಯದಲ್ಲಿ ಬೆಂಗಳೂರು ಬ್ಲಾಸ್ಟರ್ಸ್ - ಹುಬ್ಬಳ್ಳಿ ಟೈಗರ್ಸ್ ಮುಖಾಮುಖಿ

*><><><><><><><*

ಆಗಸ್ಟ್ ೧೫ ರಂದು ನವದೆಹಲಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ೨೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪಂಚಾಯತಿಗಳ ಇನ್ನೂರ ಹತ್ತು ನಾಯಕರು ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ವರ್ಷದ ವಿಶೇಷ ಅತಿಥಿಗಳಲ್ಲಿ ಗಮನಾರ್ಹ ಸಂಖ್ಯೆಯ ಮಹಿಳಾ ನಾಯಕರು ಸೇರಿದ್ದಾರೆ. ಅವರು ತಮ್ಮ ಗ್ರಾಮ ಪಂಚಾಯತ್‌ಗಳಲ್ಲಿ ಉತ್ತಮ ಮೂಲಸೌಕರ್ಯ, ವರ್ಧಿತ ಸಾರ್ವಜನಿಕ ಸೇವೆಗಳು ಮತ್ತು ಎಲ್ಲರನ್ನೂ ಒಳಗೊಂಡ ಸಮುದಾಯ ಉಪಕ್ರಮಗಳಂತಹ ಸುಧಾರಣೆಗಳನ್ನು ತಂದಿದ್ದಾರೆ. ಈ ವಿಶೇಷ ಅತಿಥಿಗಳು ಹರ್ ಘರ್ ಜಲ ಯೋಜನೆ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು ಮಿಷನ್ ಇಂದ್ರಧನುಷ್ ನಂತಹ ಪ್ರಮುಖ ಸರ್ಕಾರಿ ಯೋಜನೆಗಳನ್ನು ಪೂರೈಸುವಲ್ಲಿ ಗಮನಾರ್ಹ ಯಶಸ್ಸನ್ನು ಸಾಧಿಸಿದ್ದಾರೆ. ಈ ವಿಶೇಷ ಅತಿಥಿಗಳಿಗೆ ಔಪಚಾರಿಕ ಸನ್ಮಾನ ಕಾರ್ಯಕ್ರಮವನ್ನು ನಾಳೆ ನವದೆಹಲಿಯಲ್ಲಿ ನಡೆಸಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ. ಕಾರ್ಯಕ್ರಮದ ಸಮಯದಲ್ಲಿ, ಎಐ ಚಾಲಿತ 'ಸಭಾಸಾರ್' ಅಪ್ಲಿಕೇಶನ್ ಅನ್ನು ಪ್ರಾರಂಭಿಸಲಾಗುವುದು. ಈ ವರ್ಷದ ಕಾರ್ಯಕ್ರಮದ ವಿಷಯ "ಆತ್ಮನಿರ್ಭರ್ ಪಂಚಾಯತ್, ವಿಕಸಿತ ಭಾರತ್ ಕಿ ಪೆಹಚಾನ್"- ಅಭಿವೃದ್ಧಿ ಹೊಂದಿದ ಭಾರತದ ಪ್ರಮುಖ ಆಧಾರಸ್ತಂಭವಾಗಿ ಸ್ವಾವಲಂಬಿ ಪಂಚಾಯತ್‌ಗಳ ದೃಷ್ಟಿಕೋನ ಎಂಬುದಾಗಿದೆ.

*><><><><><><><*

ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ ನವದೆಹಲಿಯಲ್ಲಿ ಇಂದು ನಡೆಯಲಿದೆ. ಕೇಂದ್ರ ಸಚಿವರಾದ ಡಾ. ಎಸ್.ಜೈಶಂಕರ್, ನಿರ್ಮಲಾ ಸೀತಾರಾಮನ್, ಅಶ್ವಿನಿ ವೈಷ್ಣವ್ ಮತ್ತು ಪಿಯೂಷ್ ಗೋಯಲ್ ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಿಂಗಾಪುರದ ಉಪ ಪ್ರಧಾನಿ ಗ್ಯಾನ್ ಕಿಮ್ ಯೋಂಗ್ ಮತ್ತು ವಿದೇಶಾಂಗ ಸಚಿವೆ ಜೋಸೆಫೀನ್ ಟಿಯೊ ಸೇರಿದಂತೆ ಸಿಂಗಾಪುರದ ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭಾರತ-ಸಿಂಗಾಪುರ ಸಹಕಾರಕ್ಕಾಗಿ ಹೊಸ ಕಾರ್ಯಸೂಚಿಯನ್ನು ರೂಪಿಸಲು ಸಚಿವರ ದುಂಡುಮೇಜಿನ ಸಭೆಯು ಒಂದು ವಿಶಿಷ್ಟ ಕಾರ್ಯವಿಧಾನವಾಗಿದೆ. ಭಾರತ ಮತ್ತು ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಹಂಚಿಕೊಂಡಿವೆ. ೩ನೇ ಸುತ್ತಿನ ಸಚಿವರ ದುಂಡುಮೇಜಿನ ಸಭೆಯು ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ಮತ್ತು ಬಲಗೊಳಿಸಲು ಮಾರ್ಗಗಳನ್ನು ಗುರುತಿಸುತ್ತದೆ ಎಂದು ಸಚಿವಾಲಯ ಹೇಳಿದೆ. ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ಉದ್ಘಾಟನಾ ಸಭೆಯು ೨೦೨೨ ರ ಸೆಪ್ಟೆಂಬರ್‌ನಲ್ಲಿ ನವದೆಹಲಿಯಲ್ಲಿ ನಡೆದಿತ್ತು.

*><><><><><><><*

ಭಾರತದ ೭೮ನೇ ಸ್ವಾತಂತ್ರ್ಯೋತ್ಸವದ ಸ್ಮರಣಾರ್ಥ, ಮನೆಗಳಲ್ಲಿ ಭಾರತದ ತ್ರಿವರ್ಣ ಧ್ವಜವನ್ನು ಹಾರಿಸುವ "ಹರ್ ಘರ್ ತಿರಂಗಾ" ಅಭಿಯಾನವನ್ನು ದೇಶದ  ಹಲವಾರು ಸ್ಥಳಗಳಲ್ಲಿ ಆಚರಿಸಲಾಗುತ್ತಿದೆ. ಸಿಕ್ಕಿಂ ಮತ್ತು ತ್ರಿಪುರಾದಲ್ಲಿ ಇಂದು "ಹರ್ ಘರ್ ತಿರಂಗಾ" ಅಭಿಯಾನಕ್ಕೆ ಚಾಲನೆ ನೀಡಲಾಯಿತು. 'ಹರ್ ಘರ್ ತಿರಂಗ' ಅಭಿಯಾನದ ಭಾಗವಾಗಿ ಸಿಕ್ಕಿಂನ ಗ್ಯಾಂಗ್‌ಟಕ್‌ನ ಮನನ್ ಕೇಂದ್ರದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಕಾರ್ಯಕ್ರಮವನ್ನು ಸಿಕ್ಕಿಂ ಮುಖ್ಯಮಂತ್ರಿ ಪ್ರೇಮ್ ಸಿಂಗ್ ತಮಾಂಗ್ ಉದ್ಘಾಟಿಸಿದರು. ತ್ರಿಪುರಾದ ಅಗರ್ತಲಾದಲ್ಲಿ ಆಯೋಜಿಸಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ತ್ರಿಪುರಾ ಮುಖ್ಯಮಂತ್ರಿ ಮಾಣಿಕ್ ಸಹಾ, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಾಣ ತ್ಯಾಗ ಮಾಡಿದವರಿಗೆ ಗೌರವ ಸಲ್ಲಿಸಲು 'ಹರ್ ಘರ್ ತಿರಂಗ' ಅಭಿಯಾನದಲ್ಲಿ ಪ್ರತಿಯೊಬ್ಬರು ಕೈಜೋಡಿಸುವಂತೆ ನಾಗರಿಕರಿಗೆ ಮನವಿ ಮಾಡಿದರು.

*><><><><><><><*

ವಿದೇಶಿ ಒತ್ತಡದ ಹೊರತಾಗಿಯೂ ವ್ಯಾಪಾರ ಒಪ್ಪಂದಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ದಿಟ್ಟ ನಿರ್ಧಾರಕ್ಕಾಗಿ ದೇಶಾದ್ಯಂತದ ರೈತರು ಅವರಿಗೆ ಧನ್ಯವಾದ ಅರ್ಪಿಸಿದರು. ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರ ತೆಗೆದುಕೊಂಡ ನಿರ್ಣಾಯಕ ಕ್ರಮಕ್ಕೆ ಕೃತಜ್ಞತೆ ಮತ್ತು ಬೆಂಬಲವನ್ನು ವ್ಯಕ್ತಪಡಿಸಲು ರೈತ ಸಂಘಟನೆಯ ಮುಖಂಡರು ಮತ್ತು ಕೃಷಿಕರ ದೊಡ್ಡ ತಂಡ ನವದೆಹಲಿಯಲ್ಲಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿಯಾಯಿತು. ಸಂವಾದದ ಸಂದರ್ಭದಲ್ಲಿ, ನಕಲಿ ರಸಗೊಬ್ಬರಗಳು ಮತ್ತು ರಾಸಾಯನಿಕಗಳನ್ನು

ಉತ್ಪಾದಿಸುವವರ ವಿರುದ್ಧ ಸರ್ಕಾರ ಶೀಘ್ರದಲ್ಲೇ ಹೊಸ ಕಾನೂನನ್ನು ಪರಿಚಯಿಸಲಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪುನರುಚ್ಚರಿಸಿದರು. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ರೈತರಿಗೆ ವಿಮಾ ಮೊತ್ತದ ಡಿಜಿಟಲ್ ಪಾವತಿಯನ್ನು ವಿತರಿಸಲಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದ ಸಚಿವರು, ರೈತರ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಆದ್ಯತೆಯ ಮೇಲೆ ಮುಂದುವರಿಸಲಾಗುತ್ತಿದೆ ಎಂದರು. ರೈತರು ಭಾರತವನ್ನು ಪೋಷಿಸಲು ಮಾತ್ರವಲ್ಲ. ಜಗತ್ತನ್ನು ಪೋಷಿಸಲು ಹಗಲಿರುಳು ಕೆಲಸ ಮಾಡುತ್ತಾರೆ. ರೈತರು ಜೀವ ಮತ್ತು ಜೀವನ ನೀಡುವವರು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

*><><><><><><><*

ಜಮ್ಮು ಮತ್ತು ಕಾಶ್ಮೀರದ ಉರಿ ಸೆಕ್ಟರ್‌ನ ಗಡಿ ನಿಯಂತ್ರಣ ರೇಖೆಯಲ್ಲಿ ಇಂದು ಭದ್ರತಾ ಪಡೆಗಳು, ಭಯೋತ್ಪಾದಕರ ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸುವ ಸಂದರ್ಭದಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಒಬ್ಬ ಸೈನಿಕ ಹುತಾತ್ಮರಾಗಿದ್ದಾರೆ. ಬಾರಾಮುಲ್ಲಾ ಜಿಲ್ಲೆಯ ಉರಿಯ ಚುರುಂಡಾ ಪ್ರದೇಶದಲ್ಲಿ ಭದ್ರತಾ ಪಡೆಗಳು ಭಯೋತ್ಪಾದಕರ ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಿವೆ. ಭಯೋತ್ಪಾದಕರನ್ನು ಪತ್ತೆಹಚ್ಚಲು ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಏತನ್ಮಧ್ಯೆ, ಕಾಶ್ಮೀರದ ಕುಲ್ಗಮ್ ಜಿಲ್ಲೆಯ ಅಖಲ್ ದೇವ್ಸರ್ ಅರಣ್ಯ ಪ್ರದೇಶದಲ್ಲಿ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಯು ೧೩ನೇ ದಿನಕ್ಕೆ ಕಾಲಿಟ್ಟಿದೆ.

*><><><><><><><*

ರಾಜಸ್ಥಾನದ ದೌಸಾ ಜಿಲ್ಲೆಯಲ್ಲಿ ಇಂದು ಸಂಭವಿಸಿದ ಅಪಘಾತದಲ್ಲಿ ಹತ್ತು ಮಂದಿ ಸಾವನ್ನಪ್ಪಿದ್ದು, ೧೧ ಜನರು ಗಾಯಗೊಂಡಿದ್ದಾರೆ. ದೌಸಾ-ಮನೋಹರ್‌ಪುರ ಹೆದ್ದಾರಿಯ ಬಸ್ದಿ ಚೌರಾಹಾ ಬಳಿ ಇಂದು ಮುಂಜಾನೆ ಪಿಕಪ್ ವಾಹನ ಮತ್ತು ಟ್ರಕ್ ನಡುವೆ ಮುಖಾಮುಖಿ ಡಿಕ್ಕಿಯಾಗಿ ಈ ಅಪಘಾತ ಸಂಭವಿಸಿದೆ. ಮೃತರಲ್ಲಿ ಹೆಚ್ಚಿನವರು ಉತ್ತರ ಪ್ರದೇಶದ ಎಟಾ ಜಿಲ್ಲೆಯ ನಿವಾಸಿಗಳಾಗಿದ್ದು, ಸಿಕಾರ್ ಜಿಲ್ಲೆಯ ಖಾತು ಶ್ಯಾಮ್ ಜಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿ ಹಿಂತಿರುಗುತ್ತಿದ್ದರು. ತೀವ್ರವಾಗಿ ಗಾಯಗೊಂಡ ಎಂಟು ಜನರನ್ನು ಜೈಪುರದ ಎಸ್‌ಎಂಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇತರೆ ಮೂವರು ದೌಸಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂತಾಪ ಸೂಚಿಸಿದ್ದಾರೆ. ಅಪಘಾತದಲ್ಲಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಅವರು ಹಾರೈಸಿದ್ದಾರೆ.

*><><><><><><><*

ಬಿಹಾರದ ಗಂಗಾ, ಗಂಡಕ್, ಸೋನ್, ಕೋಸಿ, ಮಹಾನಂದಾ, ಬಾಗ್ಮತಿ ಸೇರಿದಂತೆ ಪ್ರಮುಖ ನದಿಗಳು ಉಕ್ಕಿ ಹರಿಯುತ್ತಿರುವುದರಿಂದ, ರಾಜ್ಯದ ೧೦ ಜಿಲ್ಲೆಗಳಲ್ಲಿ ೧೯ ಲಕ್ಷಕ್ಕೂ ಹೆಚ್ಚು ಜನರು ಪ್ರವಾಹದಿಂದ ತೊಂದರೆಗೊಳಗಾಗಿದ್ದಾರೆ. ಭಾಗಲ್ಪುರ, ಮುಂಗೇರ್, ಬೇಗುಸರಾಯ್, ವೈಶಾಲಿ, ಭೋಜ್ಪುರ್, ಖಗಾರಿಯಾ ಮತ್ತು ಪಾಟ್ನಾ ಜಿಲ್ಲೆಗಳು ಪ್ರವಾಹದಿಂದ ಹೆಚ್ಚು ಹಾನಿಗೊಳಗಿವೆ. ಬಿಹಾರದ ಹೆಚ್ಚಿನ ನದಿಗಳ ಜಲಾನಯನ ಪ್ರದೇಶಗಳಲ್ಲಿ ನಿರಂತರ ಮಳೆಯಿಂದಾಗಿ ನೀರಿನ ಮಟ್ಟ ಏರಿಕೆಯಾಗಿದ್ದು, ಅವುಗಳಲ್ಲಿ ಹೆಚ್ಚಿನವು ಅಪಾಯದ ಮಟ್ಟಕ್ಕಿಂತ ಹೆಚ್ಚಾಗಿ ಹರಿಯುತ್ತಿವೆ. ಬಹಳಷ್ಟು ಸಂಖ್ಯೆಯ ಜನರು ಸ್ಥಳಾಂತರಗೊಂಡು ಗುಡ್ಡಗಾಡು, ಎತ್ತರದ ಸ್ಥಳಗಳು ಮತ್ತು ಹೆದ್ದಾರಿಗಳಲ್ಲಿ ಆಶ್ರಯ ಪಡೆಯಬೇಕಾದ ಸ್ಥಿತಿ ನಿರ್ಮಾಣವಾಗಿದೆ.

*><><><><><><*

ಯೆಮೆನ್‌ನ ಹೌತಿ ಗುಂಪು, ಇಸ್ರೇಲ್‌ನ ನಗರಗಳಾದ ಹೈಫಾ, ನೆಗೆವ್, ಐಲಾತ್ ಮತ್ತು ಬೀರ್ ಶೆವಾಗಳನ್ನು ಗುರಿಯಾಗಿಸಿಕೊಂಡು, ನಾಲ್ಕು ಡ್ರೋನ್ ದಾಳಿಗಳನ್ನು ನಡೆಸಿದೆ ಎಂದು ಹೌತಿ ಗುಂಪಿನ ಮಿಲಿಟರಿ ವಕ್ತಾರರು ತಿಳಿಸಿದ್ದಾರೆ. ಪ್ಯಾಲೆಸ್ತೀನ್ ವಿರುದ್ಧ ಇಸ್ರೇಲ್ ತನ್ನ ಯೋಜನೆಯನ್ನು ಜಾರಿಗೆ ತಂದಿದ್ದಕ್ಕೆ ಪ್ರತಿಯಾಗಿ ಈ ದಾಳಿಗಳನ್ನು ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ. ಯೆಮೆನ್‌ನ ಹೌತಿ ಗುಂಪಿನ ದಾಳಿಗಳ ಕುರಿತು ಇಸ್ರೇಲ್‌ನಿಂದ ಇದುವರೆಗೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ.

*><><><><><><*

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಆಯೋಜಿಸಿರುವ ಮಹಾರಾಜ ಟ್ರೋಫಿ-೨೦೨೫ರ ಕ್ರಿಕೆಟ್ ಪಂದ್ಯಾವಳಿಯ ಮೂರನೇ ದಿನವಾದ ಇಂದು ಮೈಸೂರಿನ ಮಾನಸಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆಯುವ ಮೊದಲ ಪಂದ್ಯದಲ್ಲಿ ಬೆಂಗಳೂರು ಬ್ಲಾಸ್ಟರ್ಸ್ ಮತ್ತು ಹುಬ್ಬಳ್ಳಿ ಟೈಗರ್ಸ್ ತಂಡ ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೧೫ಕ್ಕೆ ಆರಂಭವಾಗಲಿದೆ. ಇದೇ ಕ್ರೀಡಾಂಗಣದಲ್ಲಿ ನಡೆಯುವ ಮತ್ತೊಂದು ಪಂದ್ಯದಲ್ಲಿ ಶಿವಮೊಗ್ಗ ಲಯನ್ಸ್ ಮತ್ತು ಮಂಗಳೂರು ಡ್ರಾಗನ್ಸ್ ತಂಡಗಳ ನಡುವೆ ಸೆಣಸಾಟ ನಡೆಯಲಿದೆ. ಪಂದ್ಯ ಸಂಜೆ ೭:೧೫ಕ್ಕೆ ಆರಂಭವಾಗಲಿದೆ.

*><><><><><><*

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ತಿಂಗಳ ೩೧ ರಂದು ಆಕಾಶವಾಣಿಯಲ್ಲಿ ಪ್ರಸಾರವಾಗುವ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶದಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೫ ನೇ ಸಂಚಿಕೆಯಾಗಲಿದೆ. ಜನತೆ ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದು.

*><><><><><><><><*